ಹಲವು ಬಾರಿ ಪ್ರಸ್ತಾಪಗೊಂಡಿದ್ದು, ಅರಣ್ಯ ಸಚಿವರು ಈ ಬಗ್ಗೆ ಪರಿಶೀಲಿಸುವುದಾಗಿ ಭರವಸೆ ನೀಡಿದ್ದರು. ಈಗಾಗಲೇ ಕಂದಾಯ ಇಲಾಖೆಯು ಪ್ರಕೃತಿ ವಿಕೋಪದಿಂದ ಮೃತಪಟ್ಟವರ ಕಾನೂನು ಬದ್ಧ ವಾಸುದಾರರಿಗೆ ರೂ. 1.00 ಲಕ್ಷ ಎಕ್ಸ್‌ಗ್ರೇಷಿಯಾ ಮಂಜೂರು ಮಾಡುತ್ತದೆ. ಈ ಆಧಾರದ ಮೇಲೆ ವನ್ಯಜೀವಿ ಹಾವಳಿಯಿಂದ ಮೃತಪಟ್ಟ ವ್ಯಕ್ತಿಯ ಕುಟುಂಬದವರಿಗೆ ರೂ. 1.00 ಲಕ್ಷ ಪ್ರತಿ ಪ್ರಕರಣಕ್ಕೆ ಪರಿಹಾರ ನೀಡಬೇಕೆಂದು ಸರ್ಕಾರ ನಿರ್ಣಯ ತೆಗೆದುಕೊಂಡು ರೂ. 25,000-00ದಿಂದ ರೂ. 1.00 ಲಕ್ಷದವರೆಗೆ ಹೆಚ್ಚಿಸಿ ಆದೇಶ ನೀಡಿದೆ. ಅದರಂತೆ ವನ್ಯಜೀವಿ ಹಾವಳಿಯಿಂದ ಮೃತಪಟ್ಟ ವ್ಯಕ್ತಿಯ ಕುಟುಂಬದವರಿಗೆ ರೂ. 1.00 ಲಕ್ಷ ಪ್ರತಿ ಪ್ರಕರಣದಲ್ಲಿ ಪರಿಹಾರ ನೀಡಲಾಗುವುದು.

ಇ) ಪ್ರಸಕ್ತ ಸಾಲಿನಲ್ಲಿ ರೂ. 2,00,00000ಗಳನ್ನು ಪರಿಹಾರ ರೂಪದಲ್ಲಿ ನೀಡಲಾಗಿದೆ.

ಹಾಲು ಉತ್ಪಾದಕರಿಗೆ ದರವನ್ನು ನಿಗದಿಪಡಿಸುವುದು

482 - ಶ್ರೀ ಎ.ಟಿ. ರಾಮಸ್ವಾಮಿ (ಅರಕಲಗೂಡು) : ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಾಲು ಉತ್ಪಾದಕರಿಗೆ ಈಗ ಕೊಡುತ್ತಿರುವ ಧಾರಣೆಯು ಪ್ರೋತ್ಸಾಹದಾಯಕವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಿ.ಬಿ. ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು) :

ಅ) ಹಾಲು ಉತ್ಪಾದಕರಿಗೆ ನೀಡುತ್ತಿರುವ ಧಾರಣೆ ಪ್ರೋತ್ಸಾಹದಾಯಕವಾಗಿರುತ್ತದೆ.

ಆ) ಉದ್ಭವಿಸುವುದಿಲ್ಲ.

ತಿಪಟೂರು ಬಳಿ ಬೈಪಾಸ್ ರಸ್ತೆ

483 - ಶ್ರೀ ಬಿ. ನಂಜಾಮರಿ (ತಿಪಟೂರು) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಿಪಟೂರು ನಗರದ ಹೊರ ವಲಯದ ರಾಜ್ಯ ಹೆದ್ದಾರಿಯಲ್ಲಿ 1987-88ರಲ್ಲಿ ಬೈಪಾಸ್ ರಸ್ತೆ ಮಾಡಲು ಸರ್ಕಾರ ಮಂಜೂರಾತಿ ನೀಡಿದ್ದು ಇದುವರೆಗೂ ಆ ಕಾಮಗಾರಿ ಕೆಲಸ ಪ್ರಾರಂಭವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ತಿಪಟೂರು ನಗರದ ಹೊರ ವಲಯ ರಸ್ತೆಗೆ 1987-88ರ ಭೂಸ್ವಾಧೀನಕ್ಕಾಗಿ 14.00 ಲಕ್ಷ ರೂ.ಗಳ ಅಂದಾಜಿಗೆ ಮಂಜೂರಾತಿ ನೀಡಿದೆ. ಹೊರ ವಲಯ ರಸ್ತೆ 7.35 ಕಿಮೀ ಉದ್ದವಿದ್ದು,

76 ಎಕರೆ 27 ಗುಂಟೆ ಜಮೀನಿನ ಅವಶ್ಯಕತೆಯಿರುತ್ತದೆ. ಇಲ್ಲಿಯವರೆಗೆ 64 ಎಕರೆ 24 ಗುಂಟೆ ಭೂಸ್ವಾಧೀನಪಡಿಸಿಕೊಳ್ಳಲಾಗಿದೆ. ಇದಕ್ಕೆ 34.72 ಲಕ್ಷ ರೂ.ಗಳ ವೆಚ್ಚವಾಗಿದೆ. ಉಳಿಕೆ 7.24 ಲಕ್ಷ ರೂ.ಗಳು ಪಾವತಿ ಮಾಡಬೇಕಿದೆ.

ಆ) ತುಮಕೂರು-ಹೊನ್ನಾವರ ರಸ್ತೆಯು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಘೋಷಿಸಲಿರುವುದರಿಂದ, ತಿಪಟೂರಿನ ಹೊರ ವಲಯ ರಸ್ತೆಗೆ ಕೇಂದ್ರ ಸರ್ಕಾರದ ಅನುದಾನವನ್ನಾಧರಿಸಿ, ಕೆಲಸ ಪ್ರಾರಂಭಿಸಲಾಗುವುದು.

ಅರಣ್ಯ ಇಲಾಖೆಯಲ್ಲಿ ವಾಹನಗಳ ಮುಟ್ಟುಗೋಲು

484 - ಶ್ರೀ ಕುಂಬ್ಳೆ ಸುಂದರರಾವ್ (ಸೂರತ್ಕಲ್) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಅರಣ್ಯ ಇಲಾಖೆ ಕಳೆದ 3 ವರ್ಷಗಳಲ್ಲಿ ಮುಟ್ಟುಗೋಲು ಹಾಕಿಕೊಂಡ ವಾಹನಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು).

ಆ) ಮುಟ್ಟುಗೋಲು ಹಾಕಿಕೊಂಡ ವಾಹನಗಳನ್ನು ಎಷ್ಟು ಅವಧಿಯೊಳಗೆ ವಿಲೇವಾರಿ ಮಾಡಲಾಗುವುದು ?

ಇ) ಇಲಾಖೆಯ ವಶದಲ್ಲಿರುವ ನಿರುಪಯೋಗವಾಗಿ ಬಿದ್ದಿರುವ ವಾಹನಗಳ ಸಂಖ್ಯೆ ಎಷ್ಟು ?

ಈ) ಇವುಗಳ ಶೀಘ್ರ ವಿಲೇವಾರಿಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

ಶ್ರೀ ಡಿ. ಮಂಜುನಾಥ್ (ಅರಣ್ಯ ಸಚಿವರು) :

ಅ) ಅರಣ್ಯ ಇಲಾಖೆಯಲ್ಲಿ ಕಳೆದ 3 ವರ್ಷಗಳಲ್ಲಿ ಅಂದರೆ 1994-95ರಿಂದ 1996-97ನೇ ಸಾಲಿನಲ್ಲಿ ಮುಟ್ಟುಗೋಲು ಹಾಕಿಕೊಂಡ ವಾಹನಗಳ ಜಿಲ್ಲಾವಾರು ವಿವರಗಳ ಪಟ್ಟಿಯನ್ನು ಇದರೊಂದಿಗೆ ಲಗತ್ತಿಸಿದೆ.

ಆ) ಮುಟ್ಟುಗೋಲು ಹಾಕಿಕೊಂಡ ವಾಹನಗಳನ್ನು ಸರಕಾರದ ಪರ ಅಮಾನತ್ತುಪಡಿಸಿಕೊಂಡು ನಂತರ ಕರ್ನಾಟಕ ಅರಣ್ಯ ಕಾಯ್ದೆ 1963 ಸೆಕ್ಷನ್ 71 ಎ ಪ್ರಕಾರ ವಾಹನಗಳನ್ನು ಟೆಂಡರ್ - ಕಂ - ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

ಇ) ಮೇಲ್ಕಂಡ ಮೂರು ವರ್ಷಗಳಲ್ಲಿ ವಿಲೇವಾರಿ ಆಗಿ ಹರಾಜಿಗೆ ಬಾಕಿ ಇರುವ ವಾಹನಗಳು ಈ ಕೆಳಕಂಡಂತೆ ಇರುತ್ತವೆ.

1994-95	44 ವಾಹನಗಳು
1995-96	234 ವಾಹನಗಳು
1996-97	110 ವಾಹನಗಳು

ಈ) ಹೌದು.